**ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಕನಕಪುರ**

**<u>ಸಿ.ಸಿ ನಂ. 132/2015</u>**

ದಿನಾಂಕಃ**. 26.03.2026** ರಂದು ಸಾಕ್ಷಿಗೆ ಮದ್ಯಾಹ್ನ **12.50** ಗಂಟೆಗೆ ಪ್ರಮಾಣ ವಚನ ಭೋದಿಸಲಾಯಿತು.

ಚಾಸಾ-**8** ಪ್ರಾಸಾ-**6**

| | |
|---|---|
| ಹೆಸರು | - ನಾಗರಾಜು |
| ತಂದೆ ಹೆಸರು | - ರಾಮೇಗೌಡ |
| ವಯಸ್ಸು | - **58** |
| ಉದ್ಯೋಗ | - ವ್ಯವಸಾಯ |
| ವಿಳಾಸ | - ತೋಟಹಳ್ಳಿಗ್ರಾಮ |

**<u>ಮುಖ್ಯವಿಚಾರಣೆ : ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರಿಂದಃ-</u>**

ನ್ಯಾಯಾಲಯದ ಮುಂದಿರುವ ಆರೋಪಿ ನನಗೆ ಪರಿಚಯ ಇಲ್ಲ.

ಸಾಕ್ಷಿ ಪಂಚನಾಮೆಯನ್ನು ನೋಡಿ ಅದರಲ್ಲಿರುವ ಒಂದು ಸಹಿಯನ್ನು ನೋಡಿ ತನ್ನ ಸಹಿ ಎಂದು ಗುರುತಿಸಿದ್ದು, ಸದರಿ **ಪಂಚನಾಮೆಯನ್ನು** ನಿಪಿ-**7** ಎಂದು ಗುರುತಿಸಿದ್ದು , ಸಾಕ್ಷಿ ಸಹಿಯನ್ನು ನಿಪಿ-**7(**ಎ**)** ಎಂದು ಗುರುತಿಸಲಾಯಿತು. ನಿ.ಪಿ.**7** ರಲ್ಲಿ ಏನು ಬರೆದಿದೆ ಗೊತ್ತಿಲ್ಲ. ನಾನು ಬೇರೆ ಪ್ರಕರಣಕ್ಕೆ ಪೋಲಿಸ್ ಠಾಣೆಗೆ ಹೋದಾಗ ಪೋಲಿಸರ ಕೋರಿಕೆಯ ಮೇರೆಗೆ ಸಹಿ ಮಾಡಿದ್ದೇನೆ.

ಪೊಲೀಸರು ನನ್ನ ಸಮಕ್ಷಮ ಪಂಚನಾಮೆ ಮಾಡಿರುವುದಿಲ್ಲ ಮತ್ತು ಏನನ್ನು ವಶಪಡಿಸಿಕೊಂಡಿರುವುದಿಲ್ಲ.

ಪೋಲಿಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ದವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರು ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)

**ಪಾಟೀ ಸವಾಲುಃ  ಮಾನ್ಯ   ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ದಿ. **03.04.2014** ರಂದು ಬೆಳಗ್ಗೆ **9.05** ಗಂಟೆಯಿಂದ **9.35** ಗಂಟೆ ಸಮಯದಲ್ಲಿ ಸಾತನೂರು ಪೋಲಿಸ್ ಠಾಣೆಯಲ್ಲಿ ನನ್ನ ಹಾಗೂ ಚಾ.ಸಾ. **9** ರವರ ಸಮಕ್ಷಮ ಮದ್ಯವನ್ನು ವಶಪಡಿಸಿಕೊಂಡರು ಪಂಚನಾಮೆಗೆ ನನ್ನ ಸಹಿಯನ್ನು ತೆಗೆದುಕೊಂಡರು ಎಂದರೆ ಸರಿಯಲ್ಲ.

ಸಾಕ್ಷಿಗೆ ದಿಃ **03.04.2014** ರಂದು ಅವನು ಪೊಲೀಸರಿಗೆ ನೀಡಿದ ಎಂಬ ಹೇಳಿಕೆಯ ಭಾಗವಾದ "ದಿ. **03.04.2014** ರಂದು .......ಕ್ರಮ ಜರುಗಿಸಬೇಕು ", ಓದಿ ಹೇಳಿದಾಗ ಅಲ್ಲಗಳೆದಿದ್ದರಿಂದ ಸದರಿ ಹೇಳಿಕೆ ಭಾಗವನ್ನು **ನಿಪಿ-8** ಎಂದು ಗುರುತಿಸಲಾಯಿತು.

ಆರೋಪಿಯೊಂದಿಗೆ ರಾಜಿ ಮಾಡಿಕೊಂಡಿರುವ ಕಾರಣ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ಶ್ರೀ.  ವಕೀಲರಿಂದಃ**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

ಮರುವಿಚಾರಣೆ ಇಲ್ಲ.

(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಮದ್ಯಾಹ್ನ **1** ಗಂಟೆವರೆಗೆ ಪಡೆದುಕೊಂಡಿರುತ್ತೇನೆ ಎಂದು ಧೃಢೀಕರಿಸುತ್ತೇನೆ)

ಓದಿ ಹೇಳಿ ಕೇಳಿ ಸರಿ ಇದೆ,

**ಮೂರನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ., ಕನಕಪುರ.**